ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 33 ಎಲ್ಇಟಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 13-08-20201

## ಅಧಿಸೂಚನೆ

1948ರ ಕನಿಷ್ಠ ವೇತನ ಕಾಯ್ದೆ (1948ರ ಕೇಂದ್ರಾಧಿನಿಯಮ 11) ರ ಅನುಸೂಚಿಗೆ "**ರೆಡಿಮಿಕ್ಸ್ ಕಾಂಕ್ರೀಟ್ ಕಾರ್ಖಾನೆಗಳಲ್ಲಿ ಉದ್ಯೋಗ**" ಈ ಉದ್ದಿಮೆಯನ್ನು ಸೇರ್ಪಡೆಗೊಳಿಸಿ, ಕನಿಷ್ಠ ವೇತನ ದರಗಳನ್ನು ನಿಗದಿಪಡಿಸಬೇಕೆಂದು ಕರ್ನಾಟಕ ಸರ್ಕಾರವು ಭಾವಿಸಿರುವುದರಿಂದ, ಕಾಯ್ದೆಯ ಕಲಂ 27ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಿನಾಂಕ 24.06.2020 ರಂದು ಈ ಅಧಿಸೂಚನೆಯನ್ನು ಇ-ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಪ್ರಕಟವಾದ ಮೂರು ತಿಂಗಳುಗಳ ಒಳಗಾಗಿ ಆಕ್ಷೇಪಣೆಗಳು ಅಥವಾ ಸಲಹೆಗಳನ್ನು ಸಲ್ಲಿಸಲು ಕಾಲಾವಕಾಶವನ್ನು ನೀಡಲಾಗಿತ್ತು. ಸರ್ಕಾರವು ಪ್ರಕಟಿಸಿರುವ ಈ ಅಧಿಸೂಚನೆಗೆ ನಿಗಧಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಅಥವಾ ಸಲಹೆಗಳು ಬಂದಿರುವುದಿಲ್ಲ.

ಆದ್ದರಿಂದ, "**ರೆಡಿಮಿಕ್ಸ್ ಕಾಂಕ್ರೀಟ್ ಕಾರ್ಖಾನೆಗಳಲ್ಲಿ ಉದ್ಯೋಗ**" ಈ ಉದ್ದಿಮೆಯನ್ನು 1948ರ ಕನಿಷ್ಠ ವೇತನ ಕಾಯ್ದೆ (1948ರ ಕೇಂದ್ರಾಧಿನಿಯಮ 11) ರ ಸೆಕ್ಷನ್ 27ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕನಿಷ್ಠ ವೇತನ ಕಾಯ್ದೆ ಅನುಬಂಧ ಭಾಗ-1ಕ್ಕೆ ಸೇರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

A Umadevi 13/8/2021

**(ಎ. ಉಮಾದೇವಿ)**
**ಪೀಠಾಧಿಕಾರಿ**-2,
**ಕಾರ್ಮಿಕ ಇಲಾಖೆ**

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಈ ಅಧಿಸೂಚನೆಯನ್ನು ಇ-ಗೆಜೆಟ್ ನಲ್ಲಿ ಪ್ರಕಟಿಸುವುದು.

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
2. ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.

**ಪ್ರತಿಯನ್ನು:**

1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಪೀಠಾಧಿಕಾರಿ-3, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ವಿಶೇಷ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

MWAB.
21/10/21
139
18/11/21
1356